ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಶಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE:

### ಪ್ರವಾಹಪೀಡಿತ ಪ್ರದೇಶಗಳಲ್ಲಿ ಮುಖ್ಯಮಂತ್ರಿ ಬಿಎಸ್‌ವೈ ವೈಮಾನಿಕ ಸಮೀಕ್ಷೆ

# ಮನೆ ನಿರ್ಮಾಣಕ್ಕೆ ₹5 ಲಕ್ಷ ಘೋಷಣೆ

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ಮಳೆಯಿಂದ ಸಂತ್ರಸ್ತರಾದ ಕುಟುಂಬಗಳಿಗೆ ರಾಜ್ಯ ಸರಕಾರ ಪರಿಹಾರ ಘೋಷಿಸಿದ್ದು, ಸಂಪೂರ್ಣ ಮತ್ತು ಭಾಗಶಃ ಮನೆಗಳಿಗೆ ಹಾನಿ ಆಗಿದ್ದರೆ ತಲಾ 5 ಲಕ್ಷ ರು. ಪರಿಹಾರ ನೀಡಲು ತೀರ್ಮಾನಿಸಲಾಗಿದೆ.

ಈ ಸಂಬಂಧ ರಾಜ್ಯ ಸರಕಾರ ಆದೇಶ ಹೊರಡಿಸಿದ್ದು, ಅಕ್ಟೋಬರ್‌ವರೆಗೆ ಮಳೆ ಮತ್ತು ಪ್ರವಾಹದಿಂದ ಬಾಧಿತರಾದ ಕುಟುಂಬಗಳಿಗೆ ಅನ್ವಯವಾಗಲಿದೆ. ಬಟ್ಟೆ ಮತ್ತು ದಿನಗಳಕೆ ವಸ್ತುಗಳಿಗೆ ಪ್ರತಿ ಕುಟುಂಬಕ್ಕೆ 10,000 ರು. ಪರಿಹಾರ ನೀಡಲಾಗುವುದು ಎಂದು ಆದೇಶದಲ್ಲಿ ತಿಳಿಸಲಾಗಿದೆ.

ಉತ್ತರ ಕರ್ನಾಟಕ ಭಾಗದ ಮಣ್ಣಿನ ಮನೆಗಳ ಪುನರ್ ನಿರ್ಮಾಣಕ್ಕೆ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಸೂಚನೆ ನೀಡಿದ್ದಾರೆ ಎಂದು ಮೂಲಗಳು ತಿಳಿಸಿವೆ.

**ವೈಮಾನಿಕ ಸಮೀಕ್ಷೆ:** ಕಲಬುರಗಿ, ಯಾದಗಿರಿ, ವಿಜಯಪುರ ಜಿಲ್ಲೆಯಲ್ಲಿ ಪ್ರವಾಹದಿಂದ ಮನೆ ಕಳೆದುಕೊಂಡವರಿಗೆ ತಕ್ಷಣ ಮನೆ ನಿರ್ಮಿಸಿಕೊಳ್ಳಲು ಪರಿಹಾರ ಹಾಗೂ ಬೆಳೆಹಾನಿಗೆ ಪರಿಹಾರ ಒದಗಿಸಲಾಗುವುದು ಎಂದು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಹೇಳಿದರು.

ಪ್ರವಾಹಪೀಡಿತ ಪ್ರದೇಶಗಳಿಗೆ ವೈಮಾನಿಕ ಸಮೀಕ್ಷೆ ಮೂಲಕ ಪರಿಸ್ಥಿತಿಯನ್ನು ವೀಕ್ಷಿಸಲು ತೆರಳುವುದಕ್ಕೆ ಬೆಂಗಳೂರಿನಿಂದ ಬಳ್ಳಾರಿ ಜಿಂದಾಲ್ ವಿಮಾನ ನಿಲ್ದಾಣಕ್ಕೆ ಆಗಮಿಸಿದ್ದ ಅವರು ಸುದ್ದಿಗಾರರೊಂದಿಗೆ ಮಾತನಾಡಿ, ಅತಿವೃಷ್ಟಿಯಿಂದ ಮನೆಗಳ ಹಾನಿ, ಬೆಳೆಹಾನಿ ಹಾಗೂ ಇನ್ನಿತರ ಸಮಸ್ಯೆಗಳನ್ನು ಪರಿಶೀಲಿಸಿ, ಅಧಿಕಾರಿಗಳೊಂದಿಗೆ ಚರ್ಚಿಸಲಾಗುವುದು. ಈಗಾಗಲೇ ಜಿಲ್ಲಾಧಿಕಾರಿಗಳಿಗೆ ಹಣ ಬಿಡುಗಡೆ ಮಾಡಲಾಗಿದೆ. ಇನ್ನೂ ಅಗತ್ಯವಿರುವ ಹಣ ಬಿಡುಗಡೆ ಮಾಡಿ ತಕ್ಷಣ ಮನೆ ಕಳೆದುಕೊಂಡವರಿಗೆ ಮನೆ ನಿರ್ಮಾಣ ಮಾಡುವುದಕ್ಕೆ ಮತ್ತು ಬೆಳೆ ಹಾನಿಗೆ ಪರಿಹಾರ ಒದಗಿಸುವುದಕ್ಕೆ ಕ್ರಮ ವಹಿಸಲಾಗುವುದು ಎಂದರು.



ಪ್ರವಾಹಪೀಡಿತ ಪ್ರದೇಶಗಳಲ್ಲಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ವೈಮಾನಿಕ ಸಮೀಕ್ಷೆ ನಡೆಸಿದರು.

**ಒಂದು ವಾರದಲ್ಲಿ 10 ಸಾವಿರ ರು. ವಿತರಿಸಿ:** ಕಲಬುರಗಿಯಲ್ಲಿ ಅಧಿಕಾರಿಗಳ ಸಭೆ ನಡೆಸಿದ ಸಿಎಂ, ಮನೆಗೆ ನೀರು ನುಗ್ಗಿ ಬಟ್ಟೆ ಮತ್ತು ಪಾತ್ರೆ ಹಾನಿಯಾದ ಕುಟುಂಬಗಳಿಗೆ ಒಂದು ವಾರದಲ್ಲಿ 10 ಸಾವಿರ ರು. ವಿತರಿಸಬೇಕು ಎಂದು ಕಲಬುರಗಿ ಜಿಲ್ಲಾಧಿಕಾರಿಗೆ ಸೂಚಿಸಿದರು.

ಗೃಹ ಸಚಿವ ಬಸವರಾಜ ಬೊಮ್ಮಾಯಿ, ಪಶುಸಂಗೋಪನಾ ಸಚಿವ ಪ್ರಭು ಚವ್ಹಾಣ ಇದ್ದರು.

## ನಾಲ್ಕೈದು ದಿನಗಳಲ್ಲಿ ಕೇಂದ್ರಕ್ಕೆ ವರದಿ

**ಈಗಾಗಲೇ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರೊಂದಿಗೂ ಈ ಕುರಿತು ಚರ್ಚಿಸಲಾಗಿದೆ. ಎಲ್ಲ ರೀತಿಯ ಸಹಕಾರ ನೀಡುವುದಾಗಿ ತಿಳಿಸಿದ್ದಾರೆ. ನಾಲ್ಕೈದು ದಿನಗಳಲ್ಲಿ ಸಂಪೂರ್ಣ ವರದಿ ಸಲ್ಲಿಸಲಾಗುವುದು. ನಂತರ ಕೇಂದ್ರ ತಂಡ ಭೇಟಿ ನೀಡಿ ಪರಿಶೀಲಿಸಲಿದೆ ಎಂದು ತಿಳಿಸಿದರು.**

## ಪ್ರವಾಹದಿಂದಾಗಿ ಹಾನಿಗೀಡಾದ ಮನೆಗಳಿಗೆ ಈ ಪ್ರಕಾರ ಪರಿಹಾರ

- **ಶೇ.75ಕ್ಕಿಂತ ಹೆಚ್ಚು ಸಂಪೂರ್ಣ ಮನೆ ಹಾನಿ ಆಗಿದ್ದರೆ (ಎ ವರ್ಗಕ್ಕೆ) 5 ಲಕ್ಷ ರು.**
- **ಶೇ.25 ರಿಂದ ಶೇ.75 ರಷ್ಟು ಭಾಗಶಃ ಹಾನಿ ಆಗಿದ್ದರೆ (ಬಿ ವರ್ಗ) (ಕೆಡವಿ ಹೊಸದಾಗಿ ನಿರ್ಮಿಸಲು) 5 ಲಕ್ಷ ರು.**
- **ಶೇ.25 ರಿಂದ ಶೇ.75 ರಷ್ಟು ಮನೆ ಹಾನಿ ಆಗಿದ್ದು ದುರಸ್ಥಿಗೆ 3 ಲಕ್ಷ ಹಾಗೂ ಶೇ.15 ರಿಂದ ಶೇ.25 ರಷ್ಟು ಅಂದರೆ, ಅಲ್ಪಸ್ವಲ್ಪ ಹಾನಿ ಆಗಿದ್ದರೆ ಅದರ ದುರಸ್ಥಿಗೆ 50 ಸಾವಿರ ರು.**